## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ.

******

ಪ್ರಶ್ನೆ:

ಗ್ರಾಮೀಣ ಪ್ರದೇಶದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮೈಸೂರು ನಗರದಲ್ಲಿನ ಪದವಿಪೂರ್ವ ತರಗತಿ ಹಾಗೂ ಪದವಿ ತರಗತಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಇವರಿಗೆ ಅಗತ್ಯಕ್ಕೆ ಅನುಗುಣವಾಗಿ ಹಿಂದುಳಿದ ವರ್ಗದ ವಸತಿ ನಿಲಯಗಳ ಸೌಕರ್ಯಗಳಿಲ್ಲದೆ ಶಿಕ್ಷಣಕ್ಕೆ ತುಂಬಾ ತೊಂದರೆಯಾಗಿರುವ ಗಂಭೀರ ಸಮಸ್ಯೆಯ ಬಗ್ಗೆ.

ಉತ್ತರ:

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಒಟ್ಟು 2438 ಸರ್ಕಾರಿ ವಿದ್ಯಾರ್ಥಿನಿಲಯಗಳು ಇದ್ದು, ಒಟ್ಟು 197736 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶದ ಸೌಲಭ್ಯ ಇರುತ್ತದೆ. ವಿವರ ಈ ಕೆಳಕಂಡಂತಿದೆ.

| ಕ್ರ. ಸಂ. | ವಿವರ | ವಿದ್ಯಾರ್ಥಿನಿಲಯಗಳ ಸಂಖ್ಯೆ | | | ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆ | | |
|---|---|---|---|---|---|---|---|
| | | ಬಾಲಕರು | ಬಾಲಕಿಯರು | ಒಟ್ಟು | ಬಾಲಕರು | ಬಾಲಕಿಯರು | ಒಟ್ಟು |
| 1 | ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು | 1010 | 291 | 1301 | 54060 | 15896 | 69956 |
| 2 | ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು | 508 | 629 | 1137 | 57913 | 69867 | 127780 |
| | ಒಟ್ಟು | 1518 | 920 | 2438 | 111973 | 85763 | 197736 |

ಮೈಸೂರು ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಒಟ್ಟು 92 ವಿದ್ಯಾರ್ಥಿನಿಲಯಗಳಿದ್ದು, ಒಟ್ಟು 7648 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡಲಾಗಿರುತ್ತದೆ.

ಈ ಪೈಕಿ ಮೈಸೂರು ನಗರದಲ್ಲಿ 3 ಮೆಟ್ರಿಕ್-ಪೂರ್ವ ಹಾಗೂ 30 ಮೆಟ್ರಿಕ್-ನಂತರದ ಒಟ್ಟು 33 ವಿದ್ಯಾರ್ಥಿನಿಲಯಗಳಿದ್ದು, ಕ್ರಮವಾಗಿ 115 ಹಾಗೂ 3578 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡಲಾಗಿರುತ್ತದೆ. ವಿವರ ಕೆಳಕಂಡಂತಿರುತ್ತವೆ.

| ಕ್ರ. ಸಂ. | ವಿವರ | ವಿದ್ಯಾರ್ಥಿನಿಲಯಗಳ ಸಂಖ್ಯೆ | | | ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆ | | |
|---|---|---|---|---|---|---|---|
| | | ಬಾಲಕರು | ಬಾಲಕಿಯರು | ಒಟ್ಟು | ಬಾಲಕರು | ಬಾಲಕಿಯರು | ಒಟ್ಟು |
| 1 | ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು | 2 | 1 | 3 | 65 | 50 | 115 |
| 2 | ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು | 16 | 14 | 30 | 1918 | 1660 | 3578 |
| | ಒಟ್ಟು | 18 | 15 | 33 | 1983 | 1710 | 3693 |

ಮುಂದುವರೆದು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸುವ ದೃಷ್ಟಿಯಿಂದ ರಾಜ್ಯದ ವಿವಿಧ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ (ಮೈಸೂರು ಜಿಲ್ಲೆಯ ಮೈಸೂರು ನಗರವನ್ನು ಒಳಗೊಂಡಂತೆ) ಸಂಖ್ಯಾಬಲ ಹೆಚ್ಚಳ ಮಾಡಲಾಗಿದ್ದು ಅದರಂತೆ, ಸರ್ಕಾರದ ಆದೇಶ ಸಂಖ್ಯೆ.ಬಿಸಿಡಬ್ಲ್ಯೂ 352 ಬಿಎಂಎಸ್ 2019, ದಿನಾಂಕ 21.1.2020ರಲ್ಲಿ 300 ವಿದ್ಯಾರ್ಥಿಗಳಿಗೆ ಮತ್ತು ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 308 ಬಿಎಂಎಸ್ 2021 ದಿನಾಂಕ 16.7.2021ರಲ್ಲಿ 170 ವಿದ್ಯಾರ್ಥಿಗಳಿಗೆ ಹೆಚ್ಚುವರಿಯಾಗಿ ಸಂಖ್ಯಾಬಲವನ್ನು ಹೆಚ್ಚಿಸಲಾಗಿರುತ್ತದೆ.

ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಆಯಾ ಆರ್ಥಿಕ ವರ್ಷದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನ್ನು ಆಧರಿಸಿರುತ್ತದೆ.

ಮುಂದುವರೆದು, ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಅರ್ಜಿ ಸಲ್ಲಿಸಿ ಪ್ರವೇಶ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪರ್ಯಾಯವಾಗಿ ಅನುದಾನದ ಲಭ್ಯತೆಯನುಸಾರ ವಿದ್ಯಾಸಿರಿ ಯೋಜನೆಯಡಿ ಪ್ರತಿ ವಿದ್ಯಾರ್ಥಿಗೆ ಪ್ರತಿ ಮಾಹೆ ರೂ.1500/- ರಂತೆ ಗರಿಷ್ಠ 10 ತಿಂಗಳಿಗೆ ರೂ.15,000/- ಗಳನ್ನು ಮಂಜೂರು ಮಾಡಲಾಗುತ್ತದೆ.

ಸಂಖ್ಯೆ: ಹಿಂವಕ 776 ಬಿಎಂಎಸ್ 2021

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ